ಅಧ್ಯಕ್ಷರು: ಈ ಬಿಲ್ ಇದಮೇಲೆ ತೆಗೆದುಕೊಳ್ಳೋಣ. ಈಗ ಏನಾಗಿದೆ ಎಂದರೆ ಸರ್ಕಾರಿ ಕೆಲಸ ನಾಟಿ ಸರಿಯಾಗಿ ಮಾಡುತ್ತಿಲ್ಲ. ಸರ್ಕಾರದವರು ಬೇಜಾರು ಪಡುತ್ತಿದ್ದಾರೆ.

ಶ್ರೀ ಪಿ.ಜಿ.ಆರ್. ಸಿಂಧ್ಯಾ: ಯಾರೂ ಬೇಜಾರು ಮಾಡಿಕೊಳ್ಳುವುದಿಲ್ಲ. ಮಾನ್ಯ ಮುಖ್ಯಮಂತ್ರಿಗಳು ಏನೂ ಬೇಜಾರು ಮಾಡಿಕೊಂಡಿಲ್ಲ. ಅಡಳಿತ ಪಕ್ಷದವರು ಕಡಿಮೆ ಮಾತನಾಡಲಿ, ವಿರೋಧ ಪಕ್ಷದವರು ನಾವು ಜಾಸ್ತಿ ಮಾತನಾಡುತ್ತೇವೆಂದು ಮಾನ್ಯ ವಿರೋಧ ಪಕ್ಷದ ನಾಯಕರು ಬೇಳಿಬಾಗ ಅವರು ಒಪ್ಪಿಕೊಂಡಿದ್ದಾರೆ.

ಅಧ್ಯಕ್ಷರು: ಈ ಬಿಲ್‌ನಲ್ಲಿ 12 ಗಂಟೆ ಬದಲಿಗೆ 24 ಗಂಟೆ ಎಂದು ತಿದ್ದುಪಡಿ ಮಾಡುವುದಷ್ಟೆ ಇರುವುದು.

(4) ಶಾಸನ ರಚನೆ

(i): ಕರ್ನಾಟಕ ಪೌರ ನಿಗಮಗಳ (ಎರಡನೇ ತಿದ್ದುಪಡಿ) ವಿಧೇಯಕ, 2000

ಪರಿಶೀಲನಾ ಪ್ರಸ್ತಾವ

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2000ರ ಕರ್ನಾಟಕ ಪೌರ ನಿಗಮಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರಿಶೀಲಿಸಬೇಕೆಂದು ಕೋರುತ್ತೇನೆ.

ಪ್ರಸ್ತಾಪವನ್ನು ಮಂಡಿಸಲಾಯಿತು.

ಶ್ರೀ ಬಿ.ಬಿ. ಚಿಮ್ಮನಕಟ್ಟಿ: ಮಾನ್ಯ ಅಧ್ಯಕ್ಷರೆ, ಕಾರ್ಪೊರೇಷನ್ ಆಕ್ಟ್ 41ನೇ ಸೆಕ್ಷನ್‌ಗೆ ತಿದ್ದುಪಡಿಯನ್ನು ತರುತ್ತಿದ್ದೇನೆ. ವಿಧಾನಸಭೆ ಚುನಾವಣೆಯಾಗಲಿ, ಲೋಕಸಭೆ ಚುನಾವಣೆಯಾಗಲಿ, ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಚುನಾವಣೆಯಲ್ಲಿ ನಾವು 48 ಗಂಟೆಗಳನ್ನು ಇಟ್ಟಿರುತ್ತೇವೆ. ಆದರೆ ನಮ್ಮ ಕಾನೂನಿನಲ್ಲಿ 24 ಗಂಟೆಗಳು ಎಂದು ಮಾತ್ರ ಇತ್ತು. ಅದಕ್ಕೆ ತಿದ್ದುಪಡಿಯನ್ನು ತಂದಿದ್ದೇವೆ. ಅದರ ಜೊತೆಗೆ ಚುನಾವಣೆ ಹಿಂದಿನ ದಿನ ಎಂಬ ಪದವನ್ನು ತೆಗೆದು ಚುನಾವಣೆಗೆ ಹಿಂದಿನ ಎರಡು ದಿನಗಳು ಎಂದು ಸೇರಿಸಬೇಕೆಂದು ಇಟ್ಟಿದ್ದೇನೆ. ಇದು ಒಂದು ಸಣ್ಣ ತಿದ್ದುಪಡಿ, ಇದನ್ನು ಸದನ ಒಪ್ಪುತ್ತದೆ ಎಂದು ಭಾವಿಸುತ್ತೇನೆ.

ಅಧ್ಯಕ್ಷರು: ಪ್ರಸ್ತಾಪ ಏನೆಂದರೆ,

"2000ನ ಕರ್ನಾಟಕ ಪೌರ ನಿಗಮಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರಿಶೀಲಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2

ಅಧ್ಯಕ್ಷರು: "ಖಂಡ, 2 ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು

(ಖಂಡ, 2 ಅನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 3

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2ನೇ ಖಂಡದ ತರುವಾಯ 3ನೇ ಹೊಸ ಖಂಡವನ್ನು ಸೇರಿಸಿಕೊಳ್ಳಲು ತಿದ್ದುಪಡಿ ಸೂಚನೆಯನ್ನು ಮಂಡಿಸುತ್ತೇನೆ.

"3. ನಿರಸನ ಮತ್ತು ಉಳಿಸುವಿಕೆಗಳು: (ಅ) ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ಅಧ್ಯಾದೇಶ, 2001 ನ್ನು (2001ರ ಕರ್ನಾಟಕ ಅಧ್ಯಾದೇಶ 2) ಈ ಮೂಲಕ ನಿರಸನಗೊಳಿಸಲಾಗಿದೆ.

(2) ಹಾಗೆ ನಿರಸನಗೊಳಿಸಿದ್ದಾಗ್ಯೂ, ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿ ಮಾಡಲಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಿದ ಯಾವುದೇ ಕಾರ್ಯ ಅಥವಾ ಕೈಗೊಂಡ ಯಾವುದೇ ಕ್ರಮವನ್ನು ಈ ಅಧಿನಿಯಮದಿಂದ ತಿದ್ದುಪಡಿ ಮಾಡಲಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು".

ಪ್ರಸ್ತಾಪ ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"3. ನಿರಸನ ಮತ್ತು ಉಳಿಸುವಿಕೆಗಳು: (1) ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ಅಧ್ಯಾದೇಶ, 2001 ನ್ನು (2001ರ ಕರ್ನಾಟಕ ಅಧ್ಯಾದೇಶ 2) ಈ ಮೂಲಕ ನಿರಸನಗೊಳಿಸಲಾಗಿದೆ.

(2) ಹಾಗೆ ನಿರಸನಗೊಳಿಸಿದ್ದಾಗ್ಯೂ, ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿ ಮಾಡಲಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಿದ ಯಾವುದೇ ಕಾರ್ಯ ಅಥವಾ ಕೈಗೊಂಡ ಯಾವುದೇ ಕ್ರಮವನ್ನು ಈ ಅಧಿನಿಯಮದಿಂದ ತಿದ್ದುಪಡಿ ಮಾಡಲಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು."

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು

ಖಂಡ 3

ಅಧ್ಯಕ್ಷರು: ಪ್ರಸ್ತಾವ ಏನೆಂದರೆ "ಹೊಸ ಖಂಡ 3 ಈ ವಿಧೇಯಕದ ಅಂಗವಾಗಿರುತ್ತದೆ."

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಹೊಸ ಖಂಡ 3 ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು): ಮಾನ್ಯ ಅಧ್ಯಕ್ಷರೆ, ಖಂಡ 1ಕ್ಕೆ ನಾನು ಈ ಕೆಳಕಂಡ ತಿದ್ದುಪಡಿಯನ್ನು ಮಂಡಿಸುತ್ತೇನೆ.

"(1) 1ನೇ ಖಂಡದಲ್ಲೇ (2)ನೇ ಉಪ ಪ್ರಕರಣದಲ್ಲಿ "ಇದು ಕೂಡಲೇ ಜಾರಿಗೆ ಬರತಕ್ಕದ್ದು" ಎಂಬ ಪದಗಳಿಗೆ "ಇದು 2001ರ ಜನವರಿ ಒಂಭತ್ತನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

ಪ್ರಸ್ತಾವ ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"(1) 1ನೇ ಖಂಡದಲ್ಲಿ (2)ನೇ ಉಪ ಪ್ರಕರಣದಲ್ಲಿ "ಇದು ಕೂಡಲೇ ಜಾರಿಗೆ ಬರತಕ್ಕದ್ದು" ಎಂಬ ಪದಗಳಿಗೆ "ಇದು 2001ರ ಜನವರಿ ಒಂಭತ್ತನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ 1 ತಿದ್ದುಪಡಿಯಾದ ರೀತಿಯಲ್ಲಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"ಖಂಡ 1 ತಿದ್ದುಪಡಿಯಾದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಖಂಡ 1 ತಿದ್ದುಪಡಿಯಾದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"ಮೊದಲನೆ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು): ಮಾನ್ಯ ಅಧ್ಯಕ್ಷರೆ, 2000ದ ಕರ್ನಾಟಕ ಪೌರ ನಿಗಮಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, "2000ದ ಕರ್ನಾಟಕ ಪೌರ ನಿಗಮಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(ii) ಕರ್ನಾಟಕ ಮೇಲ್ಪಾಟು ಮಂಡಲಿಗಳ (ತಿದ್ದುಪಡಿ) ವಿಧೇಯಕ, 2001.

ಪರ್ಯಾಲೋಚನಾ ಪ್ರಸ್ತಾವ

+ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು): ಮಾನ್ಯ ಅಧ್ಯಕ್ಷರೆ, 2001ರ ಕರ್ನಾಟಕ ಮೇರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾಪವನ್ನು ಮಂಡಿಸಲಾಯಿತು

ಶ್ರೀ ಬಿ.ಬಿ. ಚಿಮ್ಮನಕಟ್ಟಿ: ಮಾನ್ಯ ಅಧ್ಯಕ್ಷರೆ, ನಾವು ಈ ಇಂಪ್ರೂವ್‌ಮೆಂಟ್ ಆಕ್ಟ್‌ಗೆ 37-ಎ ಸೇರ್ಪಡೆ ಮಾಡುವುದಕ್ಕೆ ತಂದಿರತಕ್ಕಂಥಾದ್ದು. ಇದರ ಉದ್ದೇಶ ವಿಶೇಷವಾಗಿ ಬಾಗಲಕೋಟೆ ಪಟ್ಟಣದಲ್ಲಿ ಬಲ್ಕ್ ಅಲಾಟ್‌ಮೆಂಟ್ ಮಾಡುವುದಕ್ಕೆ ಪ್ರಾವಿಜನ್ ಮಾಡಿಕೊಂಡಿದ್ದೇವೆ. 37ರ ಸೆಕ್ಷನ್ ಆಕ್ಟ್ ಒಳಗಡೆ ಇಂಡಿವಿಜುಯಲ್ ಅಲಾಟ್‌ಮೆಂಟ್ ಮಾಡುವುದಕ್ಕೆ ಅವಕಾಶ ಇತ್ತು. ಆದರೆ ಇದು ಸೆಕ್ಷನ್ 37-ಎ ಎಂದು ಮಾರ್ಪಾಟು ಆಗಿರುವುದರಿಂದ ನಾವು ಈ ತಿದ್ದುಪಡಿ ತರುವುದರಿಂದ ಬಲ್ಕ್ ಅಲಾಟ್‌ಮೆಂಟ್ ಮಾಡುವುದಕ್ಕೆ ಸಾಧ್ಯವಾಗಿದೆ. ಈಗ ವಿಶೇಷವಾಗಿ ರಾಜ್ಯ ಸರ್ಕಾರಕ್ಕೆ ಬೇಕಾಗಬಹುದು, ಕೇಂದ್ರ ಸರ್ಕಾರಕ್ಕೆ ಬೇಕಾಗಬಹುದು, ಅದೇ ರೀತಿ ಸೊಸೈಟಿಗಳಿಗೆ ಬೇಕಾಗಬಹುದು ಮತ್ತು ಧಾರ್ಮಿಕ ಶೈಕ್ಷಣಿಕ ಸಂಸ್ಥೆಗಳಿಗೆ ಕೂಡ ಬೇಕಾಗಬಹುದು. ಅದರ ಜೊತೆಗೆ ನಾವು ಸರ್ಕಾರದ ಅನುಮತಿಯೊಂದಿಗೆ ಈ ಮಂಜೂರಾತಿಯನ್ನು ನೀಡಬೇಕು. ಮತ್ತು ಮೇಲಾಗಿ ಈಗ ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಆಗಬೇಕಾಗಿದೆ. ಈಗ ಬಾಗಲಕೋಟೆ ಒಳಗಡೆ ಸುಮಾರು 4,500 ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಂಡು ಬಹಳ ವರ್ಷವಾಯಿತು. ಆ 4,500 ಎಕರೆ ಜಮೀನಿನಲ್ಲಿ ರಿಹ್ಯಾಬಿಲಿಟೇಷನ್ ಮಾಡುವುದಕ್ಕೆ ಬಹುತೇಕ 2000 ಎಕರೆ ಸಾಕಾಗಬಹುದು. ಇನ್ನು ಉಳಿದಿರತಕ್ಕಂಥ 2000 ಎಕರೆ ಜಮೀನು ಇಂತಹ ಕೇಸುಗಳಿಗೆ ಉಪಯೋಗ ಮಾಡುವುದಕ್ಕೆ ಸಾಧ್ಯವಾಗಬಹುದು. ಮತ್ತು ಪಟ್ಟಣದ ಅಭಿವೃದ್ಧಿ ದೃಷ್ಟಿಯಿಂದ, ಈಗಾಗಲೇ ಸರ್ಕಾರ ಸುಮಾರು 242 ಕೋಟಿ ರೂಪಾಯಿಗಳನ್ನು ಖರ್ಚು ಮಾಡಿ ಆಲ್ಲಿ ರಸ್ತೆಗಳನ್ನು ಮಾಡಿರಬಹುದು, ಪ್ಲಾಟ್‌ಗಳನ್ನು ಮಾಡಿರಬಹುದು ಅನೇಕ ಸವಲತ್ತುಗಳನ್ನು ಕೊಟ್ಟರೂ ಕೂಡ ಇನ್ನೂ ಇನ್ನೂ